**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1742 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 23.03.2026 |
| ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಸರ್ಕಾರವು 2025-26 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಹುಬ್ಬಳ್ಳಿ-ಸೊಲ್ಲಾಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ಆಗಾಗ್ಗೇ ಆಗುತ್ತಿರುವ ಅಪಘಾತಗಳಲ್ಲಿ ಗಾಯಗೊಳ್ಳುವ ಗಾಯಾಳುಗಳ ತುರ್ತು ಚಿಕಿತ್ಸೆಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಕುಳಗೇರಿ ಕ್ರಾಸ್‌ನಲ್ಲಿ ಟ್ರಾಮಾಕೇರ್ ಕೇಂದ್ರವನ್ನು ಪ್ರಾರಂಭಿಸಲು ಘೋಷಣೆ ಮಾಡಿದ್ದು ಸದರಿ ಟ್ರಾಮಾಕೇರ್ ಕೇಂದ್ರವನ್ನು ನಿರ್ಮಾಣ ಮಾಡಲು ಸರ್ಕಾರವು ಬಿಡುಗಡೆ ಮಾಡಿದ ಅನುದಾನವೆಷ್ಟು; ಈ ದಿಶೆಯಲ್ಲಿ ಇಂದಿನವರೆಗೆ ಕೈಗೊಂಡ ಪ್ರಗತಿಯ ಮಾಹಿತಿಯನ್ನು ವಿವರವಾಗಿ ಒದಗಿಸುವುದು? | 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-157(ii)ರಲ್ಲಿ "ಬಾದಾಮಿ ತಾಲ್ಲೂಕಿನ ಕುಳಗೇರಿ ಕ್ರಾಸ್ ಹಾಗೂ ಚಿತ್ರದುರ್ಗದಲ್ಲಿ ಸುಸಜ್ಜಿತ ಟ್ರಾಮಾ ಕೇರ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು" ಎಂದು ಘೋಷಿಸಲಾಗಿದೆ.<br>• ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಕುಳಗೇರಿ ಕ್ರಾಸ್‌ನಲ್ಲಿ ಟ್ರಾಮಾ ಕೇರ್ ಸೆಂಟರ್ ಸ್ಥಾಪಿಸಲು ಮುಖ್ಯ ಇಂಜಿನಿಯರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜಿನಿಯರಿಂಗ್ ವಿಭಾಗ, ಬೆಂಗಳೂರು ಇವರಿಂದ ರೂ.40.00 ಕೋಟಿಗಳ ಅಂದಾಜು ಮೊತ್ತದ ಕ್ರಿಯಾಯೋಜನೆ ಸ್ವೀಕೃತವಾಗಿರುತ್ತದೆ.<br>• ಸದರಿ ಘೋಷಣೆಗೆ ಸಂಬಂಧಿಸಿದಂತೆ ಯೋಜನಾ ಇಲಾಖೆಯು ಸಹಮತಿ ನೀಡಿರುತ್ತದೆ.<br>• ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಕುಳಗೇರಿ ಕ್ರಾಸ್‌ನಲ್ಲಿ ಟ್ರಾಮಾ ಕೇರ್ ಸೆಂಟರ್ ಅನ್ನು ಸ್ಥಾಪಿಸಲು ಆರ್ಥಿಕ ಇಲಾಖೆಯು ಅಭಿಪ್ರಾಯಿಸಿರುವಂತೆ, 2026-27ನೇ ಸಾಲಿನ ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ನಿಧಿಯ ಕ್ರಿಯಾ ಯೋಜನೆಯಲ್ಲಿ ಹಿಂದಿನ ವರ್ಷದ ಬಜೆಟ್ ಘೋಷಣೆಯ ಹಂಚಿಕೆಗೆ ಆದ್ಯತೆ ನೀಡುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯ ಸಮಿತಿಯ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಲು ಪರಿಶೀಲಿಸಲಾಗುತ್ತಿದೆ.<br>• ಒಂದು ವೇಳೆ ಇದು ಸಾಧ್ಯವಾಗದಿದ್ದಲ್ಲಿ, ವೈದ್ಯಕೀಯ ಶಿಕ್ಷಣ ಇಲಾಖೆಯ ಬಂಡವಾಳ ಲೆಕ್ಕಶೀರ್ಷಿಕೆಯಡಿಯಲ್ಲಿ ಒದಗಿಸಲಾಗುವ ಅನುದಾನದ ಮಿತಿಯಲ್ಲಿ ಹಂತ ಹಂತವಾಗಿ ಅನುಷ್ಠಾನಗೊಳಿಸುವ ಬಗ್ಗೆಯೂ ಸಹ ಪರಿಶೀಲಿಸಲಾಗುತ್ತಿದೆ.<br>ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ಸದರಿ ಯೋಜನೆಗೆ ಅನುದಾನ ಬಿಡುಗಡೆಯಾಗಿರುವುದಿಲ್ಲ. |

ಸಂಖ್ಯೆ: ಎಂಇಡಿ 147 ಎಂಪಿಎಸ್ 2026

(ಡಾ|| ಶರಣಪ್ರಕಾಶ ಆರ್. ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.